**ಕರ್ನಾಟಕ ಸರ್ಕಾರ**

**ಸಂಖ್ಯೆ:** SWD/372/STP/2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:18-03-2023.

## ಸುತ್ತೋಲೆ

**ವಿಷಯ:** ಸಮಾಜ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ವಿದ್ಯಾರ್ಥಿನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚುವರಿ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸುವ ಬಗ್ಗೆ.

**ಉಲ್ಲೇಖ:** ಸುತ್ತೋಲೆ ಸಂಖ್ಯೆ: ಸಕಇ 129 ಪಕವಿ 2019, ದಿನಾಂಕ: 17.07.2019

****

2013-14ನೇ ಸಾಲಿನ ಆಯವ್ಯಯದ ಕಂಡಿಕೆ-241 ರಂತೆ ಪ್ರಸಕ್ತ ಶೈಕ್ಷಣಿಕ ಸಾಲಿನಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಯಗಳಿಗೆ ಪ್ರವೇಶ ಕೋರಿ ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ಅವರು ಕೋರಿರುವ ವಿದ್ಯಾರ್ಥಿನಿಲಯಗಳಲ್ಲಿ ಅಥವಾ ಸಮೀಪದಲ್ಲಿರುವ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಕಲ್ಪಿಸುವುದು ಮತ್ತು ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಂಡು, ಅದಕ್ಕೆ ಅಗತ್ಯವಿರುವ ಅನುದಾನ/ ಸೌಲಭ್ಯಗಳನ್ನು ಕಲ್ಪಿಸುವ ಸಂಬಂಧ ಅನುಮೋದನೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸುವುದು ಎಂದು ಸೂಚಿಸಲಾಗಿತ್ತು.

ಪ್ರಸ್ತುತ ಮಂಜೂರಾತಿ ಸಂಖ್ಯೆಗಿಂತ ಹೆಚ್ಚುವರಿ ಪ್ರವೇಶಾವಕಾಶ ಕಲ್ಪಿಸಿರುವ ಕೆಲವು ವಿದ್ಯಾರ್ಥಿನಿಲಯಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳ ಕೊರತೆ ಕಂಡುಬಂದಿರುವ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಕ್ರಮವಹಿಸುವಂತೆ ಸೂಚಿಸಿದೆ.

1. ಪ್ರತಿ ವಿದ್ಯಾರ್ಥಿನಿಲಯಗಳಲ್ಲಿ 100 ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಾತಿ ಕಲ್ಪಿಸುವುದು.
2. ವಿದ್ಯಾರ್ಥಿಗಳ ಸಂಖ್ಯೆ 100 ಕ್ಕಿಂತ ಹೆಚ್ಚಿದ್ದಲ್ಲಿ, ಬಾಡಿಗೆ ಕಟ್ಟಡದಲ್ಲಿ ವಿದ್ಯಾರ್ಥಿನಿಲಯಗಳನ್ನು ತೆರೆದು ಸದರಿ ವಿದ್ಯಾರ್ಥಿಗಳನ್ನು ಅಲ್ಲಿಗೆ ವರ್ಗಾಯಿಸುವುದು.

(ಶಂಭುಲಿಂಗಯ್ಯ)
ಸರ್ಕಾರದ ಅಪರ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

**ಇವರಿಗೆ:**

1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

2. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
3. ಎಲ್ಲಾ ಜಿಲ್ಲಾಧಿಕಾರಿಗಳಿಗೆ
4. ಎಲ್ಲಾ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
5. ಎಲ್ಲಾ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ
6. ಎಲ್ಲಾ ಜಿಲ್ಲಾ ಮಟ್ಟದ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು
7. ಎಲ್ಲಾ ಸಹಾಯಕ ನಿರ್ದೇಶಕರು ಗ್ರೇಡ್-1&2, ಸಮಾಜ ಕಲ್ಯಾಣ ಇಲಾಖೆ,
8. ಎಲ್ಲಾ ತಾಲ್ಲೂಕು ಮಟ್ಟದ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು - (ಕ್ರಮ ಸಂಖ್ಯೆ: 3 ರಿಂದ 8 ರವರೆಗೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಮತ್ತು ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರ ಮುಖಾಂತರ)
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸಮನ್ವಯಾಧಿಕಾರಿ, ಸಮಾಜ ಕಲ್ಯಾಣ ಇಲಾಖೆ.
5. ನೋಡಲ್ ಅಧಿಕಾರಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯವಾಣಿ

*****